Akashvani: Bangalore
National Bulletin in Kannada
20.12.2025 : 7.35AM
**ಆಕಾಶವಾಣಿ, ಬೆಂಗಳೂರು**

**ರಾಷ್ಟ್ರೀಯ ವಾರ್ತೆಗಳು**

20.12.2025 : 7.35AM
******

**ಮುಖ್ಯಾಂಶಗಳು:**

1. ಯೋಗವು ಜಗತ್ತಿಗೆ ಆರೋಗ್ಯ, ಸಾಮರಸ್ಯದ ಹಾದಿಯನ್ನು ತೋರಿಸಿದೆ -ಪ್ರಧಾನಿ ನರೇಂದ್ರ ಮೋದಿ ಅಭಿಮತ
2. ಪಶ್ಚಿಮಬಂಗಾಳದಲ್ಲಿಂದು ಪ್ರಧಾನಿ ೩ ಸಾವಿರದ ೨೦೦ ಕೋಟಿ ರೂಪಾಯಿ ಮೌಲ್ಯದ ಎರಡು ರಾಷ್ಟ್ರೀಯ ಹೆದ್ದಾರಿ ಲೋಕಾರ್ಪಣೆ
3. ಮುಂದಿನ ಪೀಳಿಗೆಯ ಮೂಲಸೌಕರ್ಯ ಅಭಿವೃದ್ಧಿಪಡಿಸುವಲ್ಲಿ ಗಣನೀಯ ಪ್ರಗತಿ ಸಾಧಿಸಿದ ಭಾರತ - ಗೃಹ ಸಚಿವ ಅಮಿತ್ ಶಾ
4. ಕರ್ನಾಟಕದ ಹಂಪಿಯಲ್ಲಿಂದು ವಿಜಯಪಥ ಯೋಜನೆಗೆ ಕೇಂದ್ರ ಸಚಿವೆ ನಿರ್ಮಲಾ ಸೀತಾರಾಮನ್ ಚಾಲನೆ
5. ಅಹಮದಾಬಾದ್‌ನಲ್ಲಿ ದಕ್ಷಿಣ ಆಫ್ರಿಕಾ ವಿರುದ್ಧ ಟಿ-೨೦ ಸರಣಿ ಗೆದ್ದ ಭಾರತ

**********

ಯೋಗವು ಇಡೀ ಜಗತ್ತಿಗೆ ಆರೋಗ್ಯ, ಮಾನಸಿಕ ಸಮತೋಲನ ಮತ್ತು ಸಾಮರಸ್ಯದ ಹಾದಿಯನ್ನು ತೋರಿಸಿದೆ ಎಂದು ಪ್ರಧಾನಿ ನರೇಂದ್ರ ಮೋದಿ ಅಭಿಪ್ರಾಯಪಟ್ಟಿದ್ದಾರೆ. ನವದೆಹಲಿಯಲ್ಲಿ ನಿನ್ನೆ ನಡೆದ ಸಾಂಪ್ರದಾಯಿಕ ಔಷಧದ ಕುರಿತಾದ ವಿಶ್ವಸಂಸ್ಥೆಯ ಜಾಗತಿಕ ಶೃಂಗಸಭೆಯಲ್ಲಿ ಮಾತನಾಡಿದ ಅವರು, ಭಾರತದ ಪ್ರಯತ್ನಗಳು ಮತ್ತು ೧೭೫ಕ್ಕೂ ಹೆಚ್ಚು ದೇಶಗಳ ಸಹಕಾರದೊಂದಿಗೆ ಜೂನ್ ೨೧ನ್ನು ವಿಶ್ವಸಂಸ್ಥೆಯ ಅಂತಾರಾಷ್ಟ್ರೀಯ ಯೋಗ ದಿನವೆಂದು ಘೋಷಿಸಲಾಗಿದೆ ಎಂದು ಹೇಳಿದ್ದಾರೆ.

****ಧ್ವನಿ****ಪಿಎಂ

ವಿಶ್ವ ಆರೋಗ್ಯ ಸಂಸ್ಥೆಯ ಮಹಾ ನಿರ್ದೇಶಕ ಡಾ. ಟೆಡ್ರೋಸ್ ಅಧಾನೊಮ್ ಮಾತನಾಡಿ, ಭಾರತವು ಸಂಪ್ರದಾಯ, ನಾವಿನ್ಯತೆ ಮತ್ತು ವಿಜ್ಞಾನವನ್ನು ಒಟ್ಟಾಗಿ ಮುನ್ನಡೆಸಬಹುದು ಎಂಬುದನ್ನು ತೋರಿಸಿದೆ ಎಂದು ತಿಳಿಸಿದ್ದಾರೆ.

**********

ಪ್ರಧಾನಿ ನರೇಂದ್ರ ಮೋದಿ ಇಂದು ಪಶ್ಚಿಮ ಬಂಗಾಳಕ್ಕೆ ಭೇಟಿ ನೀಡಲಿದ್ದಾರೆ. ತಮ್ಮ ಭೇಟಿಯ ಸಮಯದಲ್ಲಿ, ಅವರು, ನಾಡಿಯಾ ಜಿಲ್ಲೆಯ ರಾಣಾಘಾಟ್‌ನಲ್ಲಿ ಸುಮಾರು ೩ ಸಾವಿರದ ೨೦೦ ಕೋಟಿ ರೂಪಾಯಿ ಮೌಲ್ಯದ ಎರಡು ರಾಷ್ಟ್ರೀಯ ಹೆದ್ದಾರಿ ಯೋಜನೆಗಳನ್ನು ಉದ್ಘಾಟಿಸಿ ಶಿಲಾನ್ಯಾಸ ಮಾಡಲಿದ್ದಾರೆ. ಈ ಯೋಜನೆಗಳು ಕೋಲ್ಕತ್ತಾ ಮತ್ತು ಸಿಲಿಗುರಿ ನಡುವಿನ ಪ್ರಮುಖ ಸಂಪರ್ಕ ಕೊಂಡಿಯಾಗಿ ಕಾರ್ಯನಿರ್ವಹಿಸಲಿವೆ. ಬಳಿಕ ಗುವಾಹಟಿಯಲ್ಲಿ ಭಾರತದ ಮೊದಲ ಪ್ರಕೃತಿ ಆಧಾರಿತ ವಿಮಾನ ನಿಲ್ದಾಣ ಟರ್ಮಿನಲ್‌ಅನ್ನು ಉದ್ಘಾಟಿಸಲಿದ್ದಾರೆ. ಇದು ಅಸ್ಸಾಂನ ವಾಯುಯಾನ ಮತ್ತು ಮೂಲಸೌಕರ್ಯ ಬೆಳವಣಿಗೆಯಲ್ಲಿ ಪ್ರಮುಖ ಮೈಲಿಗಲ್ಲಾಗಿದೆ. ಈ ಅತ್ಯಾಧುನಿಕ ಸೌಲಭ್ಯವು ಭಾರತದ ಮೊದಲ ಪ್ರಕೃತಿ ಆಧಾರಿತ ವಿಮಾನ ನಿಲ್ದಾಣ ಟರ್ಮಿನಲ್ ಆಗಿದ್ದು, ಅಸ್ಸಾಂನ ಶ್ರೀಮಂತ ನೈಸರ್ಗಿಕ ಭೂದೃಶ್ಯ ಮತ್ತು ಸಾಂಸ್ಕೃತಿಕ ಪರಂಪರೆಯನ್ನು ಪ್ರತಿಬಿಂಬಿಸುವಂತೆ ವಿನ್ಯಾಸಗೊಳಿಸಲಾಗಿದೆ. ಉದ್ಘಾಟನೆಗೂ ಮುನ್ನ, ಪ್ರಧಾನಿ ಅವರು, ಎಕ್ಸ್‌ನಲ್ಲಿ ಪೋಸ್ಟ್ ಮಾಡಿ, ಹೊಸ ಟರ್ಮಿನಲ್ ಪ್ರಯಾಣಿಕರ ನಿರ್ವಹಣಾ ಸಾಮರ್ಥ್ಯವನ್ನು ಗಮನಾರ್ಹವಾಗಿ ಹೆಚ್ಚಿಸಲಿದೆ. ಈಶಾನ್ಯದಲ್ಲಿ ವಾಯುಯಾನ ಮೂಲಸೌಕರ್ಯವನ್ನು ಆಧುನೀಕರಿಸಲಿದೆ ಎಂದು ತಿಳಿಸಿದ್ದಾರೆ. ವಾರ್ಷಿಕವಾಗಿ ೧.೩ ಕೋಟಿಗೂ ಹೆಚ್ಚು ಪ್ರಯಾಣಿಕರನ್ನು ನಿರ್ವಹಿಸುವ ಸಾಮರ್ಥ್ಯದೊಂದಿಗೆ ಟರ್ಮಿನಲ್ ಅನ್ನು ಅಭಿವೃದ್ಧಿಪಡಿಸಲಾಗಿದೆ. ಗುವಾಹಟಿಯನ್ನು ಇಡೀ ಪ್ರದೇಶಕ್ಕೆ ಪ್ರಮುಖ ವಾಯುಯಾನ ಕೇಂದ್ರವಾಗಿ ಇರಿಸಲಾಗಿದೆ. ಹೊಸ ಸಂಯೋಜಿತ ಟರ್ಮಿನಲ್ ಆಧುನಿಕ ಪ್ರಯಾಣಿಕರ ಸೌಲಭ್ಯಗಳು, ಸುಧಾರಿತ ಸಂಚಾರ ಸ್ಥಳಗಳು ಮತ್ತು ಸುಧಾರಿತ ಭದ್ರತೆ ಮತ್ತು ಅತ್ಯಾಧುನಿಕ ನಿರ್ವಹಣಾ ವ್ಯವಸ್ಥೆಗಳನ್ನು ಹೊಂದಿದೆ. ಇದರ ಪ್ರಕೃತಿ-ಪ್ರೇರಿತ ವಾಸ್ತುಶಿಲ್ಪವು ಅಸ್ಸಾಂನ ನದಿಗಳು, ಕಾಡುಗಳು ಮತ್ತು ಜೀವವೈವಿಧ್ಯತೆಯನ್ನು ಪ್ರತಿಬಿಂಬಿಸುವ ವಿನ್ಯಾಸಗಳನ್ನು ಒಳಗೊಂಡಿದೆ, ಪ್ರಯಾಣಿಕರಿಗೆ ಆಗಮನ ಮತ್ತು ನಿರ್ಗಮನದ ಸಮಯದಲ್ಲಿ ಒಂದು ವಿಶಿಷ್ಟ ಸ್ಥಳದ ಅನುಭವ ನೀಡಲಿದೆ.

**********

ಕಳೆದ ೧೧ ವರ್ಷಗಳಲ್ಲಿ ಭಾರತ ಮುಂದಿನ ಪೀಳಿಗೆಯ ಮೂಲಸೌಕರ್ಯವನ್ನು ಅಭಿವೃದ್ಧಿಪಡಿಸುವಲ್ಲಿ ಗಣನೀಯ ಪ್ರಗತಿ ಸಾಧಿಸಿದೆ ಎಂದು ಕೇಂದ್ರ ಗೃಹ ಸಚಿವ ಅಮಿತ್ ಶಾ ತಿಳಿಸಿದ್ದಾರೆ. ನವದೆಹಲಿಯಲ್ಲಿ ನಡೆದ ಕ್ರೆಡೈ ರಾಷ್ಟ್ರೀಯ ಸಮಾವೇಶದಲ್ಲಿ ಮಾತನಾಡಿದ ಅವರು, ರಾಷ್ಟ್ರೀಯ ಮೂಲಸೌಕರ್ಯ ಪೈಪ್‌ಲೈನ್, ಭಾರತ್‌ಮಾಲಾ, ಸಾಗರ್‌ಮಾಲಾ ಮತ್ತು ಪರ್ವತ್‌ಮಾಲಾ ಸೇರಿದಂತೆ ಹಲವಾರು ಉಪಕ್ರಮಗಳು ನಗರಾಭಿವೃದ್ಧಿಯನ್ನು ಗಮನಾರ್ಹವಾಗಿ ಬಲಪಡಿಸಿದೆ ಎಂದು ಅಭಿಪ್ರಾಯಪಟ್ಟಿದ್ದಾರೆ. ಮನೆ ಖರೀದಿದಾರರ ಹಿತಾಸಕ್ತಿಗಳನ್ನು ರಕ್ಷಿಸುವಲ್ಲಿ ರೆರಾ, ಭಾರತದಲ್ಲಿ ಶ್ಲಾಘನೀಯವಾಗಿ ಕಾರ್ಯನಿರ್ವಹಿಸುತ್ತಿದೆ. ಮುಂದಿನ ಪೀಳಿಗೆಯ ಜಿಎಸ್‌ಟಿ ಸುಧಾರಣೆಗಳಿಂದ ರಿಯಲ್ ಎಸ್ಟೇಟ್ ವಲಯವು ಹೆಚ್ಚು ಪ್ರಯೋಜನ ಪಡೆದಿದೆ ಎಂದು ಅವರು ಪ್ರತಿಪಾದಿಸಿದ್ದಾರೆ.

****ಧ್ವನಿ *** ಅಮಿತ್ ಶಾ

**********

ಕೇಂದ್ರ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ರಾಜ್ಯ ಪ್ರವಾಸ ಕೈಗೊಂಡಿದ್ದು, ಇಂದು ಅವರು, ಹಂಪಿಯಲ್ಲಿ ವಿಜಯಪಥ ಯೋಜನೆಗೆ ಚಾಲನೆ ನೀಡಲಿದ್ದಾರೆ. ಬಳಿಕ ಅವರು, ಚಿಂತನಾ ಶಿಬಿರದಲ್ಲಿ ಭಾಗವಹಿಸಲಿದ್ದಾರೆ.  ಕಮಲಾಪುರದ ಪ್ರಾಥಮಿಕ ಆರೋಗ್ಯ ಕೇಂದ್ರದಲ್ಲಿ ನಾಳೆ ಬೆಳಗ್ಗೆ ರಾಷ್ಟ್ರೀಯ ಪಲ್ಸ್ ಪೋಲಿಯೊ ಲಸಿಕಾ ಅಭಿಯಾನಕ್ಕೆ ಚಾಲನೆ ನೀಡಲಿದ್ದಾರೆ.

**********

ಭಾರತ ಮತ್ತು ನೆದರ್‌ಲ್ಯಾಂಡ್ಸ್ ಸರ್ಕಾರ ಜಂಟಿ ವ್ಯಾಪಾರ ಮತ್ತು ಹೂಡಿಕೆ ಸಮಿತಿ ಸ್ಥಾಪನೆಯನ್ನು ತಿಳುವಳಿಕೆ ಒಪ್ಪಂದದ ಮೂಲಕ ಘೋಷಿಸಿವೆ. ಈ ಒಪ್ಪಂದಕ್ಕೆ ವಾಣಿಜ್ಯ ಮತ್ತು ಕೈಗಾರಿಕಾ ಸಚಿವಾಲಯ ಮತ್ತು ನೆದರ್‌ಲ್ಯಾಂಡ್ಸ್ ವಿದೇಶಾಂಗ ಸಚಿವಾಲಯ ಸಹಿ ಹಾಕಿದೆ. ಉಭಯ ದೇಶಗಳ ನಡುವಿನ ದ್ವಿಪಕ್ಷೀಯ ವ್ಯಾಪಾರ ಹೂಡಿಕೆ ಮತ್ತು ಆರ್ಥಿಕ ಸಹಕಾರವನ್ನು ಮತ್ತಷ್ಟು ಬಲಪಡಿಸುವಲ್ಲಿ ಇದು ಒಂದು ಪ್ರಮುಖ ಮೈಲಿಗಲ್ಲಾಗಿದೆ.

**********

ಅಹಮದಾಬಾದ್‌ನ ನರೇಂದ್ರ ಮೋದಿ ಕ್ರೀಡಾಂಗಣದಲ್ಲಿ ದಕ್ಷಿಣ ಆಫ್ರಿಕಾ ವಿರುದ್ಧ ನಿನ್ನೆ ನಡೆದ ಅಂತಿಮ ಟಿ೨೦ ಪಂದ್ಯದಲ್ಲಿ ಭಾರತ ೩೦ ರನ್‌ಗಳಿಂದ ಗೆಲುವು ಸಾಧಿಸಿದೆ. ಈ ಮೂಲಕ  ಭಾರತ ಐದು ಪಂದ್ಯಗಳ ಟಿ೨೦ ಸರಣಿಯನ್ನು ೩-೧ ಅಂತರದಿಂದ ಗೆದ್ದುಕೊಂಡಿದೆ. ಈ ಪಂದ್ಯದಲ್ಲಿ ಮೊದಲು ಬ್ಯಾಟ್ ಮಾಡಿದ ಭಾರತ ಹಾರ್ದಿಕ್ ಪಾಂಡ್ಯ ಹಾಗೂ ತಿಲಕ್ ವರ್ಮಾ ಸ್ಫೋಟಕ ಅರ್ಧಶತಕದ ನೆರವಿನಿಂದ ೨೩೧ ರನ್ ಕಲೆಹಾಕಿತು. ಈ ಗುರಿ ಬೆನ್ನಟ್ಟಿದ ದಕ್ಷಿಣ ಆಫ್ರಿಕಾ ೨೦ ಓವರ್‌ಗಳಲ್ಲಿ ಕೇವಲ ೨೦೧ ರನ್ ಗಳಿಸಲಷ್ಟೇ ಶಕ್ತವಾಯಿತು. ಇದು ಟಿ೨೦ ಮಾದರಿಯಲ್ಲಿ ಭಾರತದ ಸತತ ೧೯ನೇ ಸರಣಿ ಗೆಲುವಾಗಿದೆ. ಇದರೊಂದಿಗೆ ಟೆಸ್ಟ್ ಸರಣಿಯನ್ನು ಗೆಲ್ಲುವ ಮೂಲಕ ಭಾರತ ಪ್ರವಾಸವನ್ನು ಆರಂಭಿಸಿದ್ದ ಆಫ್ರಿಕಾ ಟಿ೨೦ ಸರಣಿ ಸೋಲಿನೊಂದಿಗೆ ತನ್ನ ಪ್ರವಾಸ ಅಂತ್ಯಗೊಳಿಸಿದೆ.

**********

೨೦೨೬ರ ಟಿ೨೦ ವಿಶ್ವಕಪ್ ಮತ್ತು ನ್ಯೂಜಿಲೆಂಡ್ ಸರಣಿಗೆ ಭಾರತ ಇಂದು ತಂಡಗಳನ್ನು ಪ್ರಕಟಿಸಲಿದೆ. ಅಜಿತ್ ಅಗರ್ಕರ್ ನೇತೃತ್ವದ ಬಿಸಿಸಿಐ ಆಯ್ಕೆ ಸಮಿತಿಯು ಮುಂಬೈನ ಪ್ರಧಾನ ಕಚೇರಿಯಲ್ಲಿ ಸಭೆ ಸೇರಿ ಆಟಗಾರರ ಪಟ್ಟಿಯನ್ನು ಅಂತಿಮಗೊಳಿಸಲಿದೆ. ಮುಂದಿನ ತಿಂಗಳು ನ್ಯೂಜಿಲೆಂಡ್ ವಿರುದ್ಧ ತವರಿನಲ್ಲಿ ನಡೆಯಲಿರುವ ಮೂರು ಏಕದಿನ ಮತ್ತು ಐದು ಟಿ೨೦ ಪಂದ್ಯಗಳನ್ನು ಒಳಗೊಂಡ ವೈಟ್-ಬಾಲ್ ಸರಣಿಗೆ ಆಯ್ಕೆ ಸಮಿತಿಯು ತಂಡವನ್ನು ಅಂತಿಮಗೊಳಿಸಲಿದೆ.ಫೆಬ್ರವರಿಯಿಂದ ಪ್ರಾರಂಭವಾಗುವ ಟಿ೨೦ ವಿಶ್ವಕಪ್‌ಗೆ ಮೊದಲು, ಭಾರತವು ಜನವರಿ ೧೧ ರಿಂದ ೩೧ ರವರೆಗೆ ಮೂರು ಏಕದಿನ ಮತ್ತು ಐದು ಟಿ೨೦ ಪಂದ್ಯಗಳನ್ನು ಆಡಲಿದೆ.

**********

ಚೀನಾದ ಹ್ಯಾಂಗ್‌ಝೌನಲ್ಲಿ ನಡೆಯಲಿರುವ ಬಿಡಬ್ಲ್ಯೂಎಫ್ ವರ್ಲ್ಡ್ ಟೂರ್ ಬ್ಯಾಡ್ಮಿಂಟನ್ ಸೆಮಿಫೈನಲ್‌ನಲ್ಲಿಂದು ಭಾರತದ ಸಾತ್ವಿಕ್ ಸಾಯಿರಾಜ್ ರಾಂಕಿರೆಡ್ಡಿ ಮತ್ತು ಚಿರಾಗ್ ಶೆಟ್ಟಿ, ಚೀನಾದ ಲಿಯಾಂಗ್ ವೀ ಕೆಂಗ್ ಮತ್ತು ವಾಂಗ್‌ಚಾಂಗ್ ಅವರನ್ನು ಎದುರಿಸಲಿದ್ದಾರೆ. ಮೂರನೇ ಶ್ರೇಯಾಂಕಿತ ಸಾತ್ವಿಕ್ ಮತ್ತು ಚಿರಾಗ್ ಜೋಡಿ ನಿನ್ನೆ ನಡೆದ ಬಿ ಗುಂಪಿನ ಪಂದ್ಯದಲ್ಲಿ ಅಗ್ರಸ್ಥಾನ ಪಡೆದು, ಸೆಮಿಫೈನಲ್ ತಲುಪಿದ ಮೊದಲ ಭಾರತೀಯ ಪುರುಷರ ಡಬಲ್ಸ್ ಜೋಡಿ ಎಂಬ ಹೆಗ್ಗಳಿಕೆಗೆ ಪಾತ್ರರಾಗಿದ್ದಾರೆ.

**********

ಸಿರಿಯಾದಲ್ಲಿ ಅಮೆರಿಕಾದ ಪಡೆಗಳ ಮೇಲೆ ನಡೆದ ದಾಳಿಗೆ ಪ್ರತಿಯಾಗಿ ಇಸ್ಲಾಮಿಕ್ ಸ್ಟೇಟ್ ಗುಂಪಿನ ವಿರುದ್ಧ ಅಮೆರಿಕ ದಾಳಿ ನಡೆಸಿದೆ. ಯುದ್ಧ ವಿಮಾನಗಳು, ಹೆಲಿಕಾಪ್ಟರ್‌ಗಳ ಮೂಲಕ ದಾಳಿ ನಡೆಸಿರುವ ಅಮೆರಿಕ, ಪ್ರಮುಖ ಶಸ್ತ್ರಾಸ್ತ್ರ ತಾಣಗಳನ್ನು ನಿರ್ಮೂಲನೆ ಮಾಡುವ ಗುರಿ ಹೊಂದಿದೆ. ದಾಳಿಯಲ್ಲಿ ಜೋರ್ಡಾನ್ ಯುದ್ಧ ವಿಮಾನಗಳು ಭಾಗಿಯಾಗಿದ್ದವು. ಈ ಹಿಂದೆ ಇಸ್ಲಾಮಿಕ್ ಸ್ಟೇಟ್ ನಡೆಸಿದ ದಾಳಿಯಲ್ಲಿ ಇಬ್ಬರು ಅಮೆರಿಕಾದ ಸೈನಿಕರು ಮತ್ತು ಇಬ್ಬರು ನಾಗರಿಕರು ಸಾವನ್ನಪ್ಪಿದ್ದರು. ಈ ಕುರಿತಂತೆ ಸಾಮಾಜಿಕ ಜಾಲತಾಣದಲ್ಲಿ ಪೋಸ್ಟ್ ಮಾಡಿರುವ ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್, ಅಮೆರಿಕನ್ನರ ಮೇಲೆ ಭವಿಷ್ಯದಲ್ಲಿ ಯಾವುದೇ ದಾಳಿ ನಡೆಸದಂತೆ ಎಚ್ಚರಿಕೆ ನೀಡಿದ್ದಾರೆ.

**********

ಭಾರತವು ಪೋಲಿಯೋ ಮುಕ್ತ ರಾಷ್ಟ್ರವಾಗಿ ೧೪ ವರ್ಷ ಕಳೆದಿದೆ. ಇದು ಒಂದು ಮಹತ್ತರ ಸಾಧನೆಯಾಗಿದ್ದರೂ, ಇತ್ತೀಚಿನ ದಿನಗಳಲ್ಲಿ ಭಾರತದ ನೆರೆಯ ರಾಷ್ಟ್ರಗಳಲ್ಲಿ Wild Polio Virus ಸಂಭಾವ್ಯ ಹರಡುವಿಕೆಯು ಇಂದಿಗೂ ಜಗತ್ತಿನಾದ್ಯಂತ ಹಾಗೂ ಭಾರತದ ಮಕ್ಕಳನ್ನು ಅಪಾಯದಂಚಿನಲ್ಲಿರಿಸಿದೆ. ಮುಂಜಾಗ್ರತಾ ದೃಷ್ಠಿಯಿಂದ ರಾಷ್ಟ್ರೀಯ ಪಲ್ಸ್ ಪೋಲಿಯೋ ಲಸಿಕಾ ಕಾರ್ಯಕ್ರಮವನ್ನು ದೇಶದಲ್ಲಿ ಮುಂದುವರಿಸಲಾಗಿದೆ.ತಜ್ಞರ ಸಲಹೆ ಹಿನ್ನೆಲೆಯಲ್ಲಿ ೫ ವರ್ಷದೊಳಗಿನ ಎಲ್ಲಾ ಮಕ್ಕಳನ್ನು ವ್ಯಾಪ್ತಿಗೊಳಪಡಿಸಿ, ರಾಷ್ಟ್ರಿಯ ಲಸಿಕಾ ದಿನವನ್ನು ನಾಳೆ ದೇಶಾದ್ಯಂತ ಹಮ್ಮಿಕೊಳ್ಳಲಾಗಿದೆ. ಪ್ರತಿ ವರ್ಷದಂತೆ ಈ ವರ್ಷವೂ ಒಂದು ಸುತ್ತಿನ ಪಲ್ಸ್ ಪೋಲಿಯೋ ಕಾರ್ಯಕ್ರಮದಲ್ಲಿ ಪ್ರತಿ ಮಗುವಿಗೆ ಎರಡು ಹನಿ ಪೋಲಿಯೋ ಲಸಿಕೆಯನ್ನು ನೀಡಲಾಗುತ್ತಿದೆ. ದೇಶಾದ್ಯಂತ ಅಂದಾಜು ೬೨ ಲಕ್ಷ ಮಕ್ಕಳಿಗೆ ಲಸಿಕೆ ಹಾಕುವ ಗುರಿ ಹೊಂದಲಾಗಿದೆ.

*****END*****